**National**
**Kannada**
**24.11.2024 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಮನ್ ಕಿ ಬಾತ್ ನ 116 ನೇ ಆವೃತ್ತಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮನದಾಳದ ಮಾತು
2. ಮುಂದಿನ ಜನವರಿ 11-12ರಂದು ವಿಕಸಿತ ಭಾರತ ಯಂಗ್ ಲೀಡರ್ಸ್ ಡೈಲಾಗ್ ಅಭಿಯಾನ
3. ಅಂತಾರಾಷ್ಟ್ರೀಯ ಚಲಚಿತ್ರೋತ್ಸವದಲ್ಲಿ ಯುವ ನಿರ್ದೇಶಕರಿಗೆ ಮನ್ನಣೆ
4. ಇಂದು ಮತ್ತು ನಾಳೆ ಐಪಿಎಲ್ ಕ್ರಿಕೆಟ್ 2025 ರ ಆಟಗಾರರ ಹರಾಜು ಪ್ರಕ್ರಿಯೆ

*****************

ಆಕಾಶವಾಣಿಯ ಜನಪ್ರಿಯ ಮನ್ ಕಿ ಬಾತ್ ಕಾರ್ಯಕ್ರಮದ 116ನೇ ಆವೃತ್ತಿಯಲ್ಲಿ ದೇಶ-ವಿದೇಶ ಭಾರತೀಯರನ್ನು ಉದ್ದೇಶಿಸಿ ಪ್ರಧಾನಮಂತ್ರಿ ನರೇಂದ್ರ ಮೋದಿ ತಮ್ಮ ಮನದಾಳದ ಮಾತನ್ನು ಹಂಚಿಕೊಂಡಿದ್ದಾರೆ.

ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣದಲ್ಲಿ ಯುವಕರ ಪಾತ್ರ ಬಹಳ ದೊಡ್ಡದು. ಸ್ವಾಮಿ ವಿವೇಕಾನಂದರ ಜನ್ಮದಿನವಾದ ಜನವರಿ 12 ರಂದು ಯುವ ದಿನ'ವಾಗಿ ಆಚರಿಸಲ್ಪಡುತ್ತಿದೆ. ಮುಂದಿನ ವರ್ಷ ಸ್ವಾಮಿ ವಿವೇ ಕಾನಂದರ 162ನೇ ಜಯಂತಿ. ಈ ಬಾರಿ ಅತ್ಯಂತ ವಿಶೇಷ ರೀತಿಯಲ್ಲಿ ಆಚರಿಸಲಾಗುವುದು.

ರಾಜಕೀಯ ಕುಟುಂಬದ ಹಿನ್ನೆಲೆ ಇಲ್ಲದ ಯುವಕರು ರಾಜಕೀಯಕ್ಕೆ ಸೇರ್ಪಡೆಗೊಳಿಸುವ ಉದ್ದೇಶದಿಂದ ದೆಹಲಿಯ ಭಾರತ ಮಂಟಪಂ ನಲ್ಲಿ ಮುಂದಿನ ವರ್ಷದ ಜನವರಿ 11-12ರಂದು ವಿಕಸಿತ ಭಾರತ ಯಂಗ್ ಲೀಡರ್ಸ್ ಡೈಲಾಗ್ ಅಭಿಯಾನ ನಡೆಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ಧ್ವನಿ: ಪ್ರಧಾನಿ

ಈ ಹಿಂದೆ ಸ್ವಾತಂತ್ರ್ಯ ದಿನದಂದು ಕೆಂಪು ಕೋಟೆಯ ಪ್ರಾಂಗಣದಿಂದ ರಾಜಕೀಯ ಕುಟುಂಬದ ಹಿನ್ನೆಲೆ ಇಲ್ಲದ ಯುವಕರು ರಾಜಕೀಯಕ್ಕೆ ಸೇರಲು ಕರೆ ನೀಡಿದ್ದನ್ನು ಉಲ್ಲೇಖಿಸಿದ ಪ್ರಧಾನಿ, ಯಾವುದೇ ರಾಜಕೀಯ ಹಿನ್ನೆಲೆ ಇಲ್ಲದ ಒಂದು ಲಕ್ಷ ಯುವಕರನ್ನು, ನವ ಯುವಕರನ್ನು ರಾಜಕೀಯ ಸೇರ್ಪಡೆಗೊಳಿಸಲು ದೇಶಾದ್ಯಂತ ವಿವಿಧ ಬಗೆಯ ವಿಶೇಷ ಅಭಿಯಾನಗಳನ್ನು ನಡೆಸಲಾಗುವುದು ಎಂದರು.

ಯುವಕರು ತಮ್ಮ ವಿಚಾರಗಳನ್ನು ನೇರವಾಗಿ ನಮ್ಮ ಮುಂದಿಡಲು ಅವಕಾಶ ಲಭಿಸುತ್ತದೆ. ದೇಶವು ಈ ಆಲೋಚನೆಗಳನ್ನು ಹೇಗೆ ಅಳವಡಿಸಿಕೊಳ್ಳಬಹುದು, ಮುಂದಕ್ಕೆ ಕೊಂಡೊಯ್ಯಬಹುದು, ಸೂಕ್ತ ಮಾರ್ಗಸೂಚಿಯನ್ನು ಹೇಗೆ ರಚಿಸಬಹುದು, ಎಂಬುದಕ್ಕಾಗಿ ನೀಲನಕ್ಷೆಯನ್ನು ಸಿದ್ಧಪಡಿಸಲಾಗುವುದು ಎಂದು ತಿಳಿಸಿದರು.

ದೇಶದ ಮುಂಬರುವ ಪೀಳಿಗೆಗೆ ಇದು ಒಂದು ಸುವರ್ಣ ಅವಕಾಶವಾಗಿದೆ. ಬನ್ನಿ ಒಗ್ಗೂಡಿ ದೇಶವನ್ನು ಕಟ್ಟೋಣ ಮತ್ತು ದೇಶವನ್ನು ಅಭಿವೃದ್ಧಿ ಪಡಿಸೋಣ ಯುವಕರಿಗೆ ಕರೆ ನೀಡಿದರು.

ಸೈಬರ್ ಅಪರಾಧಗಳಿಗೆ ಹೆಚ್ಚಾಗಿ ಹಿರಿಯರೆ ಬಲಿಯಾಗುತ್ತಾರೆ. ಇಂತಹ ಸ್ಥಿತಿಯಲ್ಲಿ ಅವರಿಗೆ ಅರಿವು ಮೂಡಿಸಿ ಸೈಬರ್ ವಂಚನೆಯಿಂದ ರಕ್ಷಿಸುವ ಜವಾಬ್ದಾರಿ ಯುವಕರ ಮೇಲಿದೆ. ಸರ್ಕಾರದಲ್ಲಿ digital arrest ಕುತಂತ್ರಕ್ಕೆ ಹಿರಿಯ ನಾಗರಿಕರು ಒಳಗಾಗುವುದನ್ನು ತಪ್ಪಿಸುವ ಬಗ್ಗೆ ಯುವಕರು ತೊಡಗಿಸಿಕೊಂಡಿದ್ದಾರೆ ಮತ್ತು ಇತರರಿಗೂ ಸ್ಫೂರ್ತಿ ನೀಡುತ್ತಿದ್ದಾರೆ ಎಂಬುದು ಸಂತಸ ವಿಚಾರ ಎಂದರು.

ಮಕ್ಕಳ ಶಿಕ್ಷಣಕ್ಕೆ ಸಂಬಂಧಿಸಿದಂತೆ ಅನೇಕ ರೀತಿಯ ಪ್ರಯೋಗಗಳು ನಡೆಯುತ್ತಿವೆ. ನಮ್ಮ ಮಕ್ಕಳಲ್ಲಿ ಸೃಜನಶೀಲತೆಯನ್ನು ವೃದ್ಧಿಸುವ ಮತ್ತು ಪುಸ್ತಕದ ಮೇಲಿನ ಪ್ರೀತಿಯನ್ನು ಹೆಚ್ಚಿಸುವ ಪ್ರಯತ್ನವಾಗಿದೆ – 'ಪುಸ್ತಕಗಳು' ಮನುಷ್ಯನ ಆತ್ಮೀಯ ಸ್ನೇಹಿತ ಎಂದು ಹೇಳಲಾಗುತ್ತದೆ ಮತ್ತು ಈಗ ಈ ಸ್ನೇಹವನ್ನು ಗಟ್ಟಿಗೊಳಿಸಲು, ಗ್ರಂಥಾಲಯಕ್ಕಿಂತ ಉತ್ತಮವಾದ ಸ್ಥಳ ಯಾವುದಿದೆ.

ತಾವು ಚೆನ್ನೈನ ಒಂದು ಉದಾಹರಣೆಯನ್ನು ನಿಮ್ಮೊಂದಿಗೆ ಹಂಚಿಕೊಳ್ಳಲು ಬಯಸುತ್ತೇನೆ. ಇಲ್ಲಿ ಮಕ್ಕಳಿಗಾಗಿ ಸೃಜನಶೀಲತೆ ಮತ್ತು ಕಲಿಕೆಯ ಕೇಂದ್ರವಾಗಿರುವಂತಹ ಗ್ರಂಥಾಲಯವನ್ನು ಸ್ಥಾಪಿಸಲಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮಕ್ಕಳಿಗೆ ಪಕ್ಷಿಗಳ ಕುರಿತು ಅರಿವು ಮೂಡಿಸುವುದಕ್ಕಾಗಿ ಕರ್ನಾಟಕದ ಮೈಸೂರಿನಲ್ಲಿ ಸಂಸ್ಥೆಯು ಮಕ್ಕಳಿಗಾಗಿ 'ಅರ್ಲಿ ಬರ್ಡ್' ಎಂಬ ಹೆಸರಿನ ಅಭಿಯಾನ ಆರಂಭಿಸಿರುವ ಬಗ್ಗೆ ಪ್ರಧಾನಿ ಶ್ಲಾಘನೆ ವ್ಯಕ್ತಪಡಿಸಿದರು.

ಸಂಸ್ಥೆಯು ಪಕ್ಷಿಗಳ ಬಗ್ಗೆ ವಿಶೇಷ ರೀತಿಯ ಗ್ರಂಥಾಲಯ ನಡೆಸುತ್ತದೆ. ಅಲ್ಲದೇ, ಮಕ್ಕಳಿಗೆ ಪ್ರಕೃತಿಯ ಬಗ್ಗೆ ಜವಾಬ್ದಾರಿಯ ಭಾವನೆ ಮೂಡಿಸುವುದಕ್ಕಾಗಿ 'Nature Education ಕಿಟ್ ಸಿದ್ಧಪಡಿಸಿದೆ. ಈ ಕಿಟ್‌ನಲ್ಲಿ ಮಕ್ಕಳಿಗಾಗಿ ಕತೆ ಪುಸ್ತಕ, ಆಟಗಳು, ಆಕ್ಟಿವಿಟಿ ಹಾಳೆಗಳು ಮತ್ತು ಜಿಗ್ ಸಾ ಒಗಟುಗಳು ಇರುತ್ತವೆ. ಈ ಸಂಸ್ಥೆ ನಗರದ ಮಕ್ಕಳನ್ನು ಹಳ್ಳಿಗಳಿಗೆ ಕರೆದುಕೊಂಡು ಹೋಗುತ್ತದೆ ಮತ್ತು ಆ ಮಕ್ಕಳಿಗೆ ಪಕ್ಷಿಗಳ ಕುರಿತು ಅರಿವು ಮೂಡಿಸುತ್ತದೆ. ಇದರಿಂದಾಗಿ ಮಕ್ಕಳು ಪಕ್ಷಿಗಳ ಅನೇಕ ಪ್ರಭೇದಗಳನ್ನು ಗುರುತಿಸಲು ಶಕ್ತರಾಗುತ್ತಿದ್ದಾರೆ ಎಂದು ಪ್ರಧಾನಿ ಹೇಳಿದರು.

*****************

ಇಂದು ಗುರುತೇಗ್ ಬಹದ್ದೂರ್ ಅವರ ಸಂಸ್ಮರಣೆಯ ಹುತಾತ್ಮ ದಿನ. ಈ ಹಿನ್ನೆಲೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಗುರುತೇಗ್ ಬಹದ್ದೂರ್ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ.

ಗುರುತೇಗ್ ಬಹದ್ದೂರ್ ಅವರು ಧರ್ಮ ರಕ್ಷಣೆ ಹಾಗೂ ಮಾನವೀಯತೆಗಾಗಿ ತ್ಯಾಗ ಬಲಿದಾನ ಮಾಡಿದ್ದಾರೆ. ಅವರ ಉಪದೇಶ ಮತ್ತು ಆದರ್ಶಗಳನ್ನು ಜನತೆ ಅಳವಡಿಸಿಕೊಳ್ಳಬೇಕು ಎಂದು ರಾಷ್ಟ್ರಪತಿಯವರು ಸಂದೇಶದಲ್ಲಿ ತಿಳಿಸಿದ್ದಾರೆ.

*****************

ನಾಳೆಯಿಂದ ಆರಂಭವಾಗಲಿರುವ ಸಂಸತ್ತಿನ ಚಳಿಗಾಲದ ಅಧಿವೇಶನಕ್ಕೂ ಮುನ್ನ ನವದೆಹಲಿಯಲ್ಲಿ ಕೇಂದ್ರ ಸರ್ಕಾರ ಕರೆದಿರುವ ಸರ್ವಪಕ್ಷ ಸಭೆ ಪ್ರಗತಿಯಲ್ಲಿದೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯುತ್ತಿದೆ. ಸಭೆಯಲ್ಲಿ, ಲೋಕಸಭೆ ಮತ್ತು ರಾಜ್ಯಸಭೆಯ ಅಧಿವೇಶನದಲ್ಲಿ ಸುಗಮ ಕಲಾಪವನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಎಲ್ಲಾ ರಾಜಕೀಯ ಪಕ್ಷಗಳಿಂದ ಬೆಂಬಲವನ್ನು ಕೋರಲಿದೆ.

ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಕೇಂದ್ರ ಸಚಿವೆ ಅನುಪ್ರಿಯಾ ಪಟೇಲ್, ಬಿಜೆಡಿ ಸಂಸದ ಸಸ್ಮಿತ್ ಪಾತ್ರ, ಎಂಡಿಎಂಕೆ ಸಂಸದ ವೈಕೊ, ಕಾಂಗ್ರೆಸ್ ಸಂಸದರಾದ ಪ್ರಮೋದ್ ತಿವಾರಿ, ಜೈರಾಮ್ ರಮೇಶ್ ಮತ್ತು ಇತರರು ಸರ್ವಪಕ್ಷ ಸಭೆಯಲ್ಲಿ ಭಾಗವಹಿಸಿದ್ದಾರೆ.

ಚಳಿಗಾಲದ ಸಂಸತ್ ಅಧಿವೇಶನ ನಾಳೆಯಿಂದ ಡಿಸೆಂಬರ್ 20ರವರೆಗೆ ನಡೆಯಲಿದೆ. ಆದಾಗ್ಯೂ, ಸಂವಿಧಾನ ದಿನಾಚರಣೆಯ ಸ್ಮರಣಾರ್ಥ ನವೆಂಬರ್ 26 ರಂದು ಸಂಸತ್ತಿನ ಅಧಿವೇಶನ ಇರುವುದಿಲ್ಲ.

*****************

'ಯಂಗ್ ಫಿಲ್ಮ್ ಮೇಕರ್ಸ್: ದಿ ಫ್ಯೂಚರ್ ಈಸ್ ನೌ' ಎಂಬ ಥೀಮ್‌ನೊಂದಿಗೆ 55 ನೇ ಅಂತಾರಾಷ್ಟ್ರೀಯ ಚಲಚಿತ್ರೋತ್ಸವ ಫೆಸ್ಟಿವಲ್ ಆಫ್ ಇಂಡಿಯಾ, ಉತ್ಸವದಲ್ಲಿ ಯುವ ಚಿತ್ರ ನಿರ್ದೇಶಕರಿಗೆ ಆದ್ಯತೆ ನೀಡಲಾಗಿದೆ.

ಕ್ರಿಯೇಟಿವ್ ಮೈಂಡ್ಸ್ ಆಫ್ ಟುಮಾರೊದಂತಹ ಅತ್ಯುತ್ತಮ ಚೊಚ್ಚಲ ನಿರ್ದೇಶಕರು ಎದುರಿಸುತ್ತಿರುವ ಸವಾಲುಗಳನ್ನು ಬಗೆಹರಿಸಲು ಗಮನ ನೀಡಲಾಗುವುದು ಜೊತೆಗೆ ಸರ್ಕಾರ, ಈ ಬಾರಿ ದೇಶದಾದ್ಯಂತದ 400 ಯುವ ಚಲನಚಿತ್ರ ವಿದ್ಯಾರ್ಥಿಗಳು ಉತ್ಸವದಲ್ಲಿ ಭಾಗವಹಿಸಲು ಅನುಕೂಲ ಮಾಡಿಕೊಟ್ಟಿದೆ.

ಅರುಣಾಚಲ ಪ್ರದೇಶದ ಭಾಗವಹಿಸುವ ಮತ್ತು ಉದಯೋನ್ಮುಖ ಚಲನಚಿತ್ರ ನಿರ್ಮಾಪಕಿ, ಎಮ್ಮಾ, ಅವಕಾಶಕ್ಕಾಗಿ ಕೃತಜ್ಞತೆಯನ್ನು ವ್ಯಕ್ತಪಡಿಸುತ್ತಾ, ಖಈಈಖ ನಲ್ಲಿ ಪ್ರದರ್ಶಿಸಲಾದ ಚಲನಚಿತ್ರಗಳಿಂದ ತಾನು ಹೆಚ್ಚು ಸ್ಫೂರ್ತಿ ಪಡೆದಿದ್ದೇನೆ ಮತ್ತು ಮುಂದಿನ ವರ್ಷದ ಉತ್ಸವದಲ್ಲಿ ತನ್ನ ಚಲನಚಿತ್ರವನ್ನು ಆಯ್ಕೆ ಮಾಡಿ ಮತ್ತು ಪ್ರದರ್ಶಿಸಲಾಗುವುದು ಎಂದು ಭಾವಿಸುತ್ತೇನೆ ಎಂದು ಹೇಳಿದರು.

*****************

ಪ್ರಧಾನಮಂತ್ರಿ ನರೇಂದ್ರ ಮೋದಿ ನವದೆಹಲಿಯಲ್ಲಿಂದು ನಡೆಯುವ 'ಒಡಿಶಾ ಪರ್ಬಾ 2024' ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಸಮಾವೇಶವನ್ನು ಉದ್ದೇಶಿಸಿ ಪ್ರಧಾನಿ ಮಾತನಾಡಲಿದ್ದಾರೆ.

ಒಡಿಶಾ ಪರ್ಬಾ ಎಂಬುದು ನವದೆಹಲಿಯಲ್ಲಿ ಒಡಿಯಾ ಸಮಾಜ್ ಎಂಬ ಟ್ರಸ್ಟ್ ನಡೆಸುವ ಪ್ರಮುಖ ಕಾರ್ಯಕ್ರಮವಾಗಿದೆ. ಈ ಮೂಲಕ ಪ್ರಧಾನಿ, ಒಡಿಯಾ ಪರಂಪರೆಯ ಸಂರಕ್ಷಣೆಗೆ ಮತ್ತು ಪ್ರಚಾರಕ್ಕೆ ಅಮೂಲ್ಯವಾದ ಬೆಂಬಲವನ್ನು ಒದಗಿಸಲು ಕಾರ್ಯನಿರ್ವಹಿಸುತ್ತಿದ್ದಾರೆ.

*****************

ಜಾರ್ಖಂಡ್‌ನಲ್ಲಿ, ಐಎನ್‌ಡಿಐಎ ಮೈತ್ರಿಕೂಟದ ಹೊಸದಾಗಿ ಆಯ್ಕೆಯಾದ ಶಾಸಕರು ತಮ್ಮ ನಾಯಕನನ್ನು ಆಯ್ಕೆ ಮಾಡಲು ಇಂದು ರಾಂಚಿಯಲ್ಲಿ ಶಾಸಕಾಂಗ ಸಭೆ ನಡೆಸಲಿದ್ದಾರೆ.

ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರ ಅಧಿಕೃತ ನಿವಾಸದಲ್ಲಿ ಸಭೆ ಕರೆಯಲಾಗಿದೆ. ಜೆಎಂಎಂ, ಕಾಂಗ್ರೆಸ್, ಆರ್‌ಜೆಡಿ ಮತ್ತು ಸಿಪಿಐ (ಎಂಎಲ್)ನ ನೂತನ ಚುನಾಯಿತ ಶಾಸಕರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಮೂಲಗಳ ಪ್ರಕಾರ, ಹೇಮಂತ್ ಸೊರೇನ್ ಅವರು ಮೈತ್ರಿಕೂಟ ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆಯಾಗುವ ಸಾಧ್ಯತೆಯಿದೆ. ನಾಯಕನಾಗಿ ಆಯ್ಕೆಯಾದ ನಂತರ, ಹೇಮಂತ್ ಸೊರೇನ್ ರಾಜ್ಯದಲ್ಲಿ ಹೊಸ ಸರ್ಕಾರ ರಚಿಸಲು ಹಕ್ಕು ಸಾಧಿಸಲಿದ್ದಾರೆ.

*****************

ವಿಶ್ವವು ಭಾರತವನ್ನು ಹೇಗೆ ಗ್ರಹಿಸುತ್ತದೆ ಎಂಬುದರಲ್ಲಿ ಬದಲಾವಣೆಯಾಗಿದೆ ಎಂದು ವಿದೇಶಾಂಗ ಸಚಿವ ಎಸ್ ಜೈಶಂಕರ್ ಹೇಳಿದ್ದಾರೆ.

8 ನೇ ಇಂಡಿಯಾ ಐಡಿಯಾಸ್ ಕಾನ್ಕ್ಲೇವ್ ಅನ್ನು ವರ್ಚುವಲ್ ಮೂಲಕ ಉದ್ದೇಶಿಸಿ ಮಾತನಾಡಿದ ಡಾ.ಜೈಶಂಕರ್, ಕಳೆದ ದಶಕದಲ್ಲಿ ಅತಿ ದೊಡ್ಡ ಬದಲಾವಣೆಯನ್ನು ಕಂಡಿದೆ ಮತ್ತು ಭಾರತವು ಈಗ ವ್ಯಾಪಾರ ಮಾಡಲು ಹೆಚ್ಚು ಸುಲಭವಾಗಿದೆ ಎಂದು ಗ್ರಹಿಸಲಾಗಿದೆ. ಮೇಕ್ ಇನ್ ಇಂಡಿಯಾ ಮಹತ್ವಾಕಾಂಕ್ಷೆಯಿಂದ ಪ್ರತಿಪಾದನೆಯತ್ತ ಸಾಗಿದೆ ಎಂದು ಅವರು ಹೇಳಿದರು.

ಭಾರತವು ತನ್ನ ಸಾಮಾಜಿಕ ಆರ್ಥಿಕ ಯೋಜನೆಗಳು ಅಥವಾ ಡಿಜಿಟಲ್ ವಹಿವಾಟನ್ನು ಜಗತ್ತು ಗಮನಿಸುತ್ತದೆ ಎಂದು ಅವರು, ಕಳೆದ ದಶಕದ ಸಾಧನೆಗಳು ಜಾಗತಿಕ ಮಾನದಂಡಗಳಿಂದಲೂ ಎದ್ದು ಕಾಣುತ್ತವೆ ಎಂದು ವಿದೇಶಾಂಗ ಸಚಿವರು ಗಮನಸೆಳೆದರು.

ಭಾರತವು ಡಿಜಿಟಲ್ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡಿರುವುದು ಅತ್ಯಂತ ಪ್ರಭಾವಶಾಲಿಯಾಗಿದೆ ಎಂದು ಅವರು ಹೇಳಿದರು.

*****************

ಸೌದಿ ಅರೇಬಿಯಾದ ಜೆಡ್ಡಾದಲ್ಲಿ ಇಂದು ಮತ್ತು ನಾಳೆ ಮುಂದಿನ ವರ್ಷದ ಇಂಡಿಯನ್ ಪ್ರೀಮಿಯರ್ ಲೀಗ್ – ಐಪಿಎಲ್ 2025ರ ಹರಾಜು ನಡೆಯಲಿದೆ. ಈ ಹಿಂದೆ 2024ರ ಐಪಿಎಲ್ ಹರಾಜುಗಳನ್ನು ಸಹ ದುಬೈ ಆಯೋಜಿಸಿದ್ದು, ಸತತ ಎರಡನೇ ವರ್ಷ ವಿದೇಶದಲ್ಲಿ ಈ ಹರಾಜು ಪ್ರಕ್ರಿಯೆ ನಡೆಸಲಾಗುತ್ತಿದೆ.

ಈ ಬಾರಿಯ ಹರಾಜಿನಲ್ಲಿ 1 ಸಾವಿರದ 165 ಭಾರತೀಯ ಮತ್ತು 409 ವಿದೇಶಿ ಆಟಗಾರರೊಂದಿಗೆ ಒಟ್ಟು 1 ಸಾವಿರದ ಐನೂರ ಎಪ್ಪತ್ತನಾಲ್ಕು ಕ್ರಿಕೆಟಿಗರು ಭಾಗವಹಿಸಿದ್ದಾರೆ. ಪ್ರತಿ ಫ್ರಾಂಚೈಸಿಯು ಗರಿಷ್ಠ 25 ಆಟಗಾರರ ತಂಡವನ್ನು ರೂಪಿಸಲು ಸಾಧ್ಯವಾಗುತ್ತದೆ. ಜತೆಗೆ ಹರಾಜಿನಿಂದ ಒಟ್ಟು 204 ಸ್ಲಾಟ್‌ಗಳನ್ನು ಪಡೆದುಕೊಳ್ಳಲಾಗುವುದು. ಲಭ್ಯವಿರುವ 204 ಸ್ಲಾಟ್‌ಗಳಿಗೆ 10 ಫ್ರಾಂಚೈಸಿಗಳು ಒಟ್ಟಾರೆಯಾಗಿ ಸುಮಾರು 641.5 ಕೋಟಿ ರೂಪಾಯಿಗಳನ್ನು ಖರ್ಚು ಮಾಡಲಿವೆ.

********ಮುಕ್ತಾಯ********